ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

ಕೃಷ್ಣ-ತುಂಗ ಆವರಣ, ಮಂತ್ರಾಲಯ ರಸ್ತೆ (ಎನ್.ಹೆಚ್. 167), ಯರಗೇರಾ-584133, ರಾಯಚೂರು, ಕರ್ನಾಟಕ

ಆಡಳಿತ ವಿಭಾಗ E-mail: registrarrur@gmail.com

---

ಸಂ:ರಾವಿರಾ/ಆಡಳಿತ/2024-25/771 ದಿನಾಂಕ: 31.08.2024

# -: ಸುತ್ತೋಲೆ :-

ಮಾನ್ಯ ಕುಲಪತಿಗಳ ನಿರ್ದೇಶನದಂತೆ ಈ ಮೂಲಕ ರಾಯಚೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸುವುದೇನೆಂದರೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿಯ ಅಂಗವಾಗಿ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ ಸ್ನಾತಕೋತ್ತರ, ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ಪ್ರತಿ ವಿಭಾಗದಲ್ಲಿ ಮೂರು ಪ್ರಬಂಧಗಳನ್ನು ಆಯ್ಕೆ ಮಾಡಿ ಅತ್ಯುತ್ತಮ ಮೂರು ಪ್ರಬಂಧಗಳಿಗೆ ಅಕ್ಟೋಬರ್ 02ರಂದು ಜಿಲ್ಲಾ ಮಟ್ಟದ ಗಾಂಧಿಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ ಪ್ರಬಂಧ ರಚನೆಕಾರರಿಗೆ ಗೌರವಿಸಲಾಗುವುದು. ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ಪ್ರಬಂಧ ವಿಷಯಗಳು ಈ ಕೆಳಗಿನಂತಿವೆ.

**ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ:**

1) ಇಂದಿನ ಪ್ರಜಾಪ್ರಭುತ್ವದಲ್ಲಿ ಸತ್ಯಾಗ್ರಹದ ಮಹತ್ವ.
2) ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು.
3) ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು.
4) ಗಾಂಧೀಜಿಯವರ ವಿಚಾರದಲ್ಲಿ ಸತ್ಯದ ಪರಿಕಲ್ಪನೆ.
5) ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಐದು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

**ಬಹುಮಾನಗಳ ವಿವರ:**

ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ ರೂ. 3000/- ದ್ವಿತೀಯ ಸ್ಥಾನಕ್ಕೆ ರೂ. 2000/- ಹಾಗೂ ತೃತೀಯ ಸ್ಥಾನಕ್ಕೆ ರೂ. 1000/- ಬಹುಮಾನ ನೀಡಲಾಗುವುದು.

ಆದ್ದರಿಂದ ತಮ್ಮ ಮಹಾವಿದ್ಯಾಲಯಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗಾಗಿ ದಿನಾಂಕ: 10.09.2024 ರೊಳಗಾಗಿ ಸ್ಪರ್ಧೆಗಳನ್ನು ಆಯೋಜಿಸಿ, ದಿನಾಂಕ: 12.09.2024ರೊಳಗಾಗಿ ಪ್ರಬಂಧಗಳನ್ನು ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಗೆ ತಲುಪಿಸುವಂತೆ ಸೂಕ್ತ ಕ್ರಮವಹಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಶ್ರೀ ಸುಲೈಮಾನ ಡಿ. ನದಾಫ್ ಮೊ.ನಂ. 9449926128 ಜಿಲ್ಲಾ ವಾರ್ತಾಧಿಕಾರಿಗಳು, ವಿಳಾಸ: ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಡಳಿತ ಭವನ, ಬಿ. ಬ್ಲಾಕ್, 1ನೇ ಮಹಡಿ, ಯಾದಗಿರಿ – 585 202 ದೂ.ಸಂ: 08473 253722ಗೆ ಸಂಪರ್ಕಿಸಬಹುದು.

31/8/2024

ಉಪ ಕುಲಸಚಿವರು
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

Deputy Registrar
Raichur University
RAICHUR.

ಗೆ,
ರಾಯಚೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಪದವಿ ಕಾಲೇಜುಗಳ ಎಲ್ಲಾ ಪ್ರಾಂಶುಪಾಲರುಗಳಿಗೆ
ಅಗತ್ಯ ಕ್ರಮಕ್ಕಾಗಿ.

ಕರ್ನಾಟಕ ಸರ್ಕಾರ

# ಜಿಲ್ಲಾ ಪಂಚಾಯತ ಕಾರ್ಯಾಲಯ ಯಾದಗಿರಿ

Email id: ceoyadgir@gmail.com ಫ್ಯಾಕ್ಸ್ : 08473 253756, ದೂರವಾಣಿ : 253750

## ಸುತ್ತೋಲೆ

ವಿಷಯ : ರಾಜ್ಯಮಟ್ಟದಲ್ಲಿ ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಗೆ ಪ್ರೌಢ ಶಾಲೆ, ಪದವಿ ಪೂರ್ವ ಕಾಲೇಜು ಹಾಗೂ ಪದವಿ ಸ್ನಾತಕೋತ್ತರ ಪದವಿ ವಿಭಾಗಗಳಲ್ಲಿ ಪ್ರಬಂಧ ಸ್ಪರ್ಧೆ ಆಯೋಜಿಸುವ ಬಗ್ಗೆ.

********

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 150ನೇ ಜಯಂತಿಯ ಅಂಗವಾಗಿ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ ಸ್ನಾತಕೋತ್ತರ, ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಪ್ರತಿ ವಿಭಾಗಗಳಿಂದ ಆಯ್ಕೆಯಾಗುವ ಮೂರು ಅತ್ಯುತ್ತಮ ಪ್ರಬಂಧಗಳಿಗೆ, ಜಿಲ್ಲಾ ಮಟ್ಟದಲ್ಲಿ " ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 150ನೇ ಜಯಂತಿ " ಸಮಾರಂಭದಲ್ಲಿ ಪ್ರಶಸ್ತಿಯನ್ನು ನೀಡುವುದರ ಜತೆಗೆ ಆ ಪ್ರಬಂಧಗಳನ್ನು ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಆಯ್ಕೆ ಕಳುಹಿಸಲಾಗುತ್ತದೆ.
ಪ್ರಬಂಧ ವಿಷಯಗಳು ಈ ರೀತಿ ಇದೆ.

**ಪ್ರೌಢ ಶಾಲಾ ವಿಭಾಗ:**

1. ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ.
2. ಗಾಂಧೀಜಿಯವರ ವಿಚಾರದಲ್ಲಿ ಸತ್ಯಾಗ್ರಹ.
3. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ
4. ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ.

ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

**ಪದವಿ ಪೂರ್ವ ಶಿಕ್ಷಣ ವಿಭಾಗ:**

1. ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ
2. ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು.
3. ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ.
4. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ.

ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 1500 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

**ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ:**

1. ಇಂದಿನ ಪ್ರಜಾಪ್ರಭುತ್ವದಲ್ಲಿ ಸತ್ಯಾಗ್ರಹದ ಮಹತ್ವ.
2. ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು.
3. ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು.
4. ಗಾಂಧೀಜಿಯವರ ವಿಚಾರದಲ್ಲಿ ಸತ್ಯದ ಪರಿಕಲ್ಪನೆ.
5. ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಐದು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

**ಬಹುಮಾನಗಳ ವಿವರ :**

ಪ್ರೌಢಶಾಲೆ, ಪದವಿಪೂರ್ವ, ಕಾಲೇಜು ಹಾಗೂ ಸ್ನಾತಕೋತ್ತರ ಮೂರು ಪ್ರತ್ಯೇಕ ವಿಭಾಗಗಳ ಪ್ರಬಂಧ ಸ್ಪರ್ಧೆ ವಿಜೇತರಾದವರಿಗೆ ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ 3000 ರೂ. ದ್ವಿತೀಯ ಸ್ಥಾನಕ್ಕೆ 2000 ರೂ. ತೃತೀಯ ಸ್ಥಾನಕ್ಕೆ 1000 ರೂ. ಬಹುಮಾನ ನೀಡಲಾಗುವುದು.

Scanned with OKEN Scanner

ಜಿಲ್ಲಾ ಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯಮಟ್ಟದಲ್ಲಿ ಮರುಮೌಲ್ಯಮಾಪನ ಮಾಡಿ, ರಾಜ್ಯಮಟ್ಟದ ಫಲಿತಾಂಶಘೋಷಿಸಲಾಗುವುದು. ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ 31,000 ರೂ. ದ್ವಿತೀಯ ಸ್ಥಾನಕ್ಕೆ 21000 ರೂ. ತೃತೀಯ ಸ್ಥಾನಕ್ಕೆ 11000 ರೂ.ಗಳು ಬಹುಮಾನನೀಡಲಾಗುವುದು.

ಪ್ರಬಂಧ ರಚಿಸಲು ನಿಬಂಧನೆಗಳು :

1)ಪ್ರಬಂಧವು ಸಂಪೂರ್ಣವಾಗಿಸ್ವಿರಚಿತವಾಗಿರಬೇಕು.

2)ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧಬರೆಯಬೇಕು.

3)ಆಕಾರವಾಗಿ ಬಳಸಿದ ಪರಾಮರ್ಶನ/ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ/ಆಧಾರಗ್ರಂಥಗಳ ಮೊಬೈಲ್‌ಗಳ ಬಳಕೆಗೆ ಅವಕಾಶ ವಿರುವುದಿಲ್ಲ.

4)ಪ್ರಬಂಧಕಾರರ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ನಮೂದಿಸಿರಬೇಕು.

5)ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು.

6)ಆಯ್ಕೆ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

ಗಾಂಧಿ ವಿಚಾರಗಳ ತಜ್ಞರು, ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಕಾಲೇಜು ವಿಶ್ವವಿದ್ಯಾನಿಲಯಗಳ ಶಿಕ್ಷಕರು, ಪ್ರಾಧ್ಯಾಪಕರನ್ನು ಒಳಗೊಂಡ ಸಮಿತಿಯೊಂದಿಗೆ ಪರಿಶೀಲಿಸಿ, ಮೌಲ್ಯಮಾಪನ ಮಾಡಿ, ಅವುಗಳನ್ನು ಅತ್ಯುತ್ತಮವೆನಿಸಿದ ಪ್ರತಿವಿಭಾಗದಲ್ಲಿ ಮೂರು (3) ಪ್ರಬಂಧಗಳನ್ನು ಆಯ್ಕೆಮಾಡಲಿದೆ.
ಪ್ರತಿ ವಿಭಾಗದಲ್ಲಿನ ಅತ್ಯುತ್ತಮವಾದ ಮೂರು ಪ್ರಬಂಧಗಳಿಗೆ ಅಕ್ಟೋಬರ್ 02 ರಂದು ಜಿಲ್ಲಾ ಮಟ್ಟದ ಗಾಂಧಿಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ ಪ್ರಬಂಧ ರಚನೆಕಾರರಿಗೆ ಗೌರವಿಸಲ್ಾಗುವುದು. ಆದುದರಿಂದ ತಮ್ಮ ಅಧೀನ ಪ್ರೌಢ ಶಾಲೆಗಳಲ್ಲಿ/ಪದವಿಪೂರ್ವ ಕಾಲೇಜುಗಳಲ್ಲಿ /ಪದವಿ ಕಾಲೇಜು ಮತ್ತು ವಿಶ್ವವಿದ್ಯಾನಿಲಯಗಳಲ್ಲಿ ದಿನಾಂಕ 10-09-2024 ರೊಳಗಾಗಿ ಸ್ಪರ್ಧೆಗಳನ್ನು ಆಯೋಜಿಸಿ, ದಿನಾಂಕ 12-09-2024 ರೊಳಗಾಗಿ ಪ್ರಬಂಧಗಳನ್ನು ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಛೇರಿಗೆ ತಲುಪಿಸುವಂತೆ ಸೂಕ್ತ ಕ್ರಮವಹಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಶ್ರೀ ಸುಲೈಮಾನ ಡಿ.ನದಾಫ್ ಮೊ. ಸಂ.9449926128 ಜಿಲ್ಲಾ ವಾರ್ತಾಧಿಕಾರಿಗಳು, ವಿಳಾಸ ಹಿರಿಯ ಸಹಾಯಕ ನಿರ್ದೇಶಕರು ಕಛೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಜಿಲ್ಲಾಡಳಿತ ಭವನ, ಬಿ. ಬ್ಲಾಕ್, 1ನೇ ಮಹಡಿ ಯಾದಗಿರಿ 585 202 ದೂ.ಸಂ.08473 253722ಗೆ ಸಂಪರ್ಕಿಸಬಹುದು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತ್ ಕಾರ್ಯಾಲಯ
ಯಾದಗಿರಿ.
30/8/24

ಇವರಿಗೆ,

1)ಕುಲಪತಿಗಳು, ರಾಯಚೂರು ವಿಶ್ವವಿದ್ಯಾನಿಲಯ, ರಾಯಚೂರು.

2)ಕುಲಪತಿಗಳು, ಕಲ್ಬುರ್ಗಿ ವಿಶ್ವವಿದ್ಯಾನಿಲಯ, ಕಲಬುರ್ಗಿ.

3)ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಯಾದಗಿರಿ.

4)ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಪಂಚಾಯತ್, ಯಾದಗಿರಿ.

5)ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಯಾದಗಿರಿ.

Scanned with OKEN Scanner